ಮಂಗಳವಾರ 07.10.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 68
Digital Varthe Kannada Daily
Volume 01 - Issue 68
Tuesday
07.10.2025
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

# ಚಿಕ್ಕಬಳ್ಳಾಪುರದಲ್ಲಿ ಪವನ್ 'ಪವರ್' ಪ್ರದರ್ಶನ:
## ಸರ್ ಎಂ. ವಿಶ್ವೇಶ್ವರಯ್ಯರನ್ನು ಹಾಡಿ ಹೊಗಳಿದ ಆಂಧ್ರ ಡಿಸಿಎಂ



ಚಿಕ್ಕಬಳ್ಳಾಪುರ: ಚಿಂತಾಮಣಿಯಲ್ಲಿ ನಡೆದ ಒಂದು ವಿಶೇಷ ಕಾರ್ಯಕ್ರಮದಲ್ಲಿ ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಮತ್ತು ನಟ ಪವನ್ ಕಲ್ಯಾಣ್ ಅವರು ಕನ್ನಡದಲ್ಲಿ ಮಾತನಾಡಿ ಎಲ್ಲರ ಗಮನ ಸೆಳೆದಿದ್ದಾರೆ. ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ಗೋಪಾಲಗೌಡ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ಚಿನ್ನಸಂದ್ರ ಬಳಿ ಆಯೋಜಿಸಲಾಗಿದ್ದ ಈ ಕಾರ್ಯಕ್ರಮಕ್ಕೆ ಸುಮಾರು ಒಂದು ಲಕ್ಷದಷ್ಟು ಜನರಿದ್ದರು. ಪವನ್ ಕಲ್ಯಾಣ್ ಅವರು ವೇದಿಕೆಯ ಮೇಲೆ ಏರಿದಾಗ 'ಜೈ ಪವನ್ ಕಲ್ಯಾಣ್' ಘೋಷಣೆ ಕೂಗಿದರು.

ಪವನ್ ಕಲ್ಯಾಣ್‌ರ ಆಗಮನಕ್ಕೆ ಸಾವಿರಾರು ಅಭಿಮಾನಿಗಳು ಸೇರಿದ್ದು, ಕಾರ್ಯಕ್ರಮದ ವೇದಿಕೆಯು ಜನಸಾಗರದಂತೆ ಕಂಡುಬಂತು. ಈ ಕಾರ್ಯಕ್ರಮಕ್ಕೆ ಸುಮಾರು 1 ಲಕ್ಷಕ್ಕೂ ಹೆಚ್ಚು ಜನರು ಹಾಜರಾಗಿದ್ದರು ಎಂದು ಅಂದಾಜಿಸಲಾಗಿದೆ. ಅಹಿತಕರ ಘಟನೆಗಳು ನಡೆಯದಂತೆ ಪೊಲೀಸರು ಬಿಗಿ ಭದ್ರತೆ ಏರ್ಪಡಿಸಿದ್ದರು. ಕೇಂದ್ರ ಸಚಿವ ವಿ. ಸೋಮಣ್ಣ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಪವನ್ ಕಲ್ಯಾಣ್ ವೇದಿಕೆಯ ಮೇಲೇರಿದ ಕೂಡಲೇ ಅಭಿಮಾನಿಗಳು 'ಓಜಿ, ಓಜಿ' ಎಂದು ಘೋಷಣೆ ಕೂಗಿದರು. ಪವನ್ ಕಲ್ಯಾಣ್ ತಮ್ಮ ಭಾಷಣವನ್ನು ಕನ್ನಡದಲ್ಲೇ ಆರಂಭಿಸಿದ್ದು , ಸಭಿಕರ ಹೃದಯ ಗೆದ್ದರು. "ಚಿಂತಾಮಣಿಯ ಸಹೋದರ ಸಹೋದರಿಯರಿಗೆ ನಮಸ್ಕಾರಗಳು. ಕನ್ನಡ ಸಂಸ್ಕೃತಿಗೆ, ಸರ್ ಎಂ. ವಿಶ್ವೇಶ್ವರಯ್ಯ ಹಾಗೂ ತಮ್ಮ ರಚನೆಗಳಿಂದ ಪ್ರಖ್ಯಾತರಾದ ಕುಪ್ಪಳಿ ವೆಂಕಟಪ್ಪ ಪುಟ್ಟಪ್ಪ ಅವರಿಗೂ ನಮನಗಳು" ಎಂದು ಹೇಳುತ್ತಾ ಕರುನಾಡ ಮಹನೀಯರನ್ನು ನೆನೆದರು.

ಗೋಪಾಲಗೌಡರ ಹುಟ್ಟುಹಬ್ಬದಲ್ಲಿ ಭಾಗಿಯಾಗಿರುವುದು ತಮಗೆ ಸಂತೋಷ ತಂದಿದೆ ಎಂದು ಪವನ್ ಹೇಳಿದರು. ಅನಾರೋಗ್ಯದ ನಡುವೆಯೂ ಕಾರ್ಯಕ್ರಮಕ್ಕೆ ಹಾಜರಾದ ಅವರು, ಭಾಷಣ ಮುಂದುವರೆಸಿದರು. ಜನಸೇನಾ ಪಕ್ಷಕ್ಕೆ ಬಲ ನೀಡಿದವರಲ್ಲಿ ಗೋಪಾಲಗೌಡ ಕೂಡ ಒಬ್ಬರು ಎಂದು ಕೊಂಡಾಡಿದರು. "ಅವರು ಹೋರಾಟಗಾರರು, ಜನಸೇನಾ ಪಕ್ಷದ ಸಿದ್ಧಾಂತಗಳನ್ನು ಗೌರವಿಸುತ್ತಾರೆ. ನಮ್ಮ ಹೋರಾಟಕ್ಕೆ ಅವರು ಬಲ ಇದ್ದಂತೆ. ನಮ್ಮಿಬ್ಬರಿಗೂ ಯುವಜನತೆ, ರೈತರು, ಪರಿಸರದ ಬಗ್ಗೆ ಕಾಳಜಿ ಇದೆ. ಆದರಿಂದಲೇ ನಾನು ರಾಜಕೀಯಕ್ಕೆ ಬಂದೆ. ನಾನು ಸೋಲುವ ಸಮಯದಲ್ಲಿ ಗೋಪಾಲಗೌಡ ಅವರು ನನಗೆ ಶಕ್ತಿ ತುಂಬಿದರು" ಎಂದು ನಿವೃತ್ತ ನ್ಯಾಯಮೂರ್ತಿಯನ್ನು ಪ್ರಶಂಸಿಸಿದರು.

ಪವನ್ ಕಲ್ಯಾಣ್ ಆಂಧ್ರ ಮತ್ತು ಕರ್ನಾಟಕದ ನಡುವಿನ ಬಾಂಧವ್ಯದ ಬಗ್ಗೆ ಮಾತಾಡುತ್ತಾ, "ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರಿಗೆ ಆಹಾರ ಕೊಡುವ ಅಕ್ಷಯ ಪಾತ್ರೆಯಂತೆ ಇದೆ. ನಿಮ್ಮ ಅಭಿಮಾನ ಮತ್ತು ಪ್ರೀತಿ ನನ್ನನ್ನು ಇಲ್ಲಿಗೆ ಕರೆದುಕೊಂಡು ಬಂದಿದೆ. ಆಂಧ್ರ ಮತ್ತು ಕರ್ನಾಟಕದ ನಡುವೆ ದಶಕಗಳಿಂದ ಗೌರವ ಇದೆ. ಆಂಧ್ರಪ್ರದೇಶದಲ್ಲಿ ಕನ್ನಡ ಶಾಲೆಗಳಿವೆ, ಜನರು ಕನ್ನಡ ಕಲಿಯುತ್ತಿದ್ದಾರೆ" ಎಂದರು. ಮತ್ತಷ್ಟು ಉದಾಹರಣೆ ನೀಡುತ್ತಾ, "ಕಾಡು ಆಮೆಗಳನ್ನು ನಿಯಂತ್ರಿಸಲು ಕುಳ್ಕಿ ಆನೆಗಳನ್ನು ಕರ್ನಾಟಕ ನಮ್ಮ ರಾಜ್ಯಕ್ಕೆ ಕಳುಹಿಸಿದೆ. ಇದು ಆಂಧ್ರ ಹಾಗೂ ಕರ್ನಾಟಕದ ಬಾಂಧವ್ಯವನ್ನು ಪ್ರತಿನಿಧಿಸುತ್ತದೆ. ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರದ ಸಹಾಯದೊಂದಿಗೆ ಹಲವು ಕಾರ್ಯಕ್ರಮಗಳು ನಡೆಯುತ್ತಿವೆ" ಎಂದು ಹೇಳಿದರು.

ಕಲೆ ಮತ್ತು ಸಂಸ್ಕೃತಿಯನ್ನು ಒಂದುಗೂಡಿಸಬೇಕು, ಬೇರೆ ಮಾಡಬಾರದು ಎಂದು ಪವನ್ ಒತ್ತಿ ಹೇಳಿದರು. "ನಾವೆಲ್ಲಾ ಭಾರತ ಮಾತೆಯ ಮಕ್ಕಳು. ಆಂಧ್ರಪ್ರದೇಶಕ್ಕೆ ಕರ್ನಾಟಕದ ಮೇಲೆ ತುಂಬಾ ಪ್ರೀತಿ ಇದೆ. ಕರ್ನಾಟಕದ ಸಂಸ್ಕೃತಿಯನ್ನು ಯಾವಾಗಲೂ ಪ್ರೀತಿಸುತ್ತದೆ. ಚಲನಚಿತ್ರಗಳು ಸೇರಿದಂತೆ ಹಲವು ಆಯಾಮಗಳಲ್ಲಿ ಗೌರವಿಸುತ್ತದೆ" ಎಂದು ಮಾತು ಮುಗಿಸುತ್ತಾ 'ಜೈ ಹಿಂದ್, ಜೈ ಕರ್ನಾಟಕ ಮಾತೆ' ಎಂದು ಘೋಷಣೆ ಕೂಗಿದರು.

# ಸಿಜೆ ಬಿ.ಆರ್. ಗವಾಯಿ ಅವರಿಗೆ ಅವಮಾನ ಮಾಡಿದ ವಕೀಲನನ್ನು ತಕ್ಷಣ ಬಂಧಿಸಬೇಕು – ಸಿಎಂ



ಸುಪ್ರೀಂ ಕೋರ್ಟ್ ನ ಮುಖ್ಯನ್ಯಾಯಮೂರ್ತಿಗಳಾಗಿರುವ ಬಿ.ಆರ್.ಗವಾಯಿ ಅವರಿಗೆ ವಕೀಲನೊಬ್ಬ ಶೂ ಎಸೆದು ಅವಮಾನ ಮಾಡಿದ್ದರು.ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕುವ ಮೂಲಕ ಪ್ರತಿಕ್ರಿಯೆ ನೀಡಿದ್ದಾರೆ.

ಸಿಎಂ ಸಿದ್ದರಾಮಯ್ಯ ತಮ್ಮ ಪೋಸ್ಟ್‌ನಲ್ಲಿ, ಸುಪ್ರೀಂ ಕೋರ್ಟ್ ನ ಮುಖ್ಯನ್ಯಾಯಮೂರ್ತಿಗಳಾಗಿರುವ ಬಿ.ಆರ್. ಗವಾಯಿ ಅವರಿಗೆ ವಕೀಲನೊಬ್ಬ ಶೂ ಎಸೆದು ಅವಮಾನಮಾಡಿರುವ ಘಟನೆಯನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ. ಮುಖ್ಯನ್ಯಾಯಮೂರ್ತಿಗಳು ಮತ್ತು ನ್ಯಾಯಾಲಯಕ್ಕೆ ಅವಮಾನ ಮಾಡಿರುವ ಕಿಡಿಗೇಡಿ ವಕೀಲನನ್ನು ತಕ್ಷಣ ಬಂಧಿಸಿ ಕಾನೂನು ಕ್ರಮಕೈಗೊಳ್ಳಬೇಕೆಂದು ಆಗ್ರಹಪಡಿಸುತ್ತೇನೆ.

ದಲಿತ ಸಮುದಾಯಕ್ಕೆ ಸೇರಿರುವ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ಸಾಮಾಜಿಕ ಪ್ರತಿರೋಧಗಳನ್ನು ಎದುರಿಸಿ ಅರ್ಹತೆ ಮತ್ತು ಸಾಧನೆ ಮೂಲಕ ಉನ್ನತ ಸ್ಥಾನಕ್ಕೇರಿದವರು. ಜಾತಿ ಮೂಲದ ಅಸಮಾನತೆ ಮತ್ತು ಅಸಹನೆ ಸಂವಿಧಾನ ಜಾರಿಗೆ ಬಂದ 75 ವರ್ಷಗಳ ನಂತರವೂ ಮನುವಾದಿಗಳ ಮನಸ್ಸಲ್ಲಿ ಭದ್ರವಾಗಿ ಉಳಿದುಕೊಂಡಿದೆ ಎನ್ನುವುದಕ್ಕೆ ಇಂದಿನ ಘಟನೆ ಸಾಕ್ಷಿಯಾಗಿದೆ.

ಗೌರವಾನ್ವಿತ ಮುಖ್ಯನ್ಯಾಯಮೂರ್ತಿಗಳಾದ ಬಿ.ಆರ್. ಗವಾಯಿ ಅವರು ಒಬ್ಬಂಟಿಯಲ್ಲ. ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೇಲೆ ನಂಬಿಕೆ ಇಟ್ಟಿರುವ ಕೋಟ್ಯಂತರ ಜಾತ್ಯತೀತ ಮನಸ್ಸುಗಳು ಅವರ ಬೆಂಬಲಕ್ಕೆ ಇವೆ ಎನ್ನುವುದನ್ನು ಅವರ ಗಮನಕ್ಕೆ ತರಬಯಸುತ್ತೇನೆ. ಮುಖ್ಯನ್ಯಾಯಮೂರ್ತಿಗಳು ಯಾವುದೇ ಪಕ್ಷ ಇಲ್ಲವೇ ಧರ್ಮಕ್ಕೆ ಸೇರಿದವರಲ್ಲ. ಈ ದೃಷ್ಟಿಯಿಂದ ದೇಶದ ಎಲ್ಲ ಜಾತಿ, ಧರ್ಮ ಮತ್ತು ಪಕ್ಷಗಳ ಜನರು ಸುಪ್ರೀಂ ಕೋರ್ಟ್ ನಲ್ಲಿ ಇಂದು ನಡೆದಿರುವ ಘಟನೆಯನ್ನು ಒಕ್ಕೊರಲಿನಿಂದ ಖಂಡಿಸಬೇಕೆಂದು ಮನವಿ ಮಾಡುತ್ತೇನೆ.

ಜಾತಿ ಮತ್ತು ಧರ್ಮದ ಹೆಸರಲ್ಲಿ ಸಮಾಜವನ್ನು ಒಡೆದುಹಾಕಿ, ಪರಸ್ಪರ ದ್ವೇಷ ಮತ್ತು ಅಸಹನೆಯನ್ನು ಹುಟ್ಟುಹಾಕಿರುವ ಕಾರಣಕ್ಕಾಗಿಯೇ ರಾಕೇಶ್ ಕಿಶೋರ್ ನಂತಹ ಮನುವಾದಿ ಮನಸ್ಸುಗಳು ಸಮಾಜದಲ್ಲಿ ಹುಟ್ಟಿಕೊಂಡಿವೆ ಎನ್ನುವುದನ್ನು ನಾವು ಮರೆಯಬಾರದು. ನಾಥೂರಾಮ್ ಗೋಡ್ಸೆಯಂತಹ ಒಬ್ಬ ಕೊಲೆಗಡುಕನನ್ನು ದೇಶಪ್ರೇಮಿ ಎಂದು ಮೆರೆಸಲು ಹೊರಟಿರುವ ರೀತಿಯಲ್ಲಿಯೇ ಕೆಲವು ಪುಂಡರು ವಕೀಲನ ಕುಕೃತ್ಯವನ್ನು ಸಂಭ್ರಮಿಸುತ್ತಿರುವುದನ್ನು ಕಾಣುತ್ತಿದ್ದೇವೆ. ಇಂತಹವರ ವಿರುದ್ಧವೂ ಕಾನೂನು ಕ್ರಮ ಕೈಗೊಳ್ಳಬೇಕಾದ ಅಗತ್ಯ ಇದೆ ಎಂದು ನಾನು ತಿಳಿದುಕೊಂಡಿದ್ದೇನೆ ಎಂದು ವಕೀಲರ ವಿರುದ್ಧ ಕಿಡಿಕಾರಿದ್ದಾರೆ.

# ಕಾಂತಾರದ ಹಾಡಿನ ಮೂಲಕ ಕನ್ನಡಕ್ಕೆ ಬಂದ ಕೆನಡಾ ಮೂಲದ ಭಾರತೀಯ ಗಾಯಕ ಅಬ್ಬಿ ವಿ



ಬಾಕ್ಸಾಫೀಸ್ನಲ್ಲಿಯೂ ಭರ್ಜರಿ ಕಮಾಯಿ ಮಾಡುತ್ತಿರುವ ಈ ಚಿತ್ರ ಹಲವು ದಾಖಲೆಗಳನ್ನು ಅಚ್ಚೊತ್ತುತ್ತಿದೆ. ಪ್ರೇಕ್ಷಕರು, ಸಿನಿಮಾಮೇಕರ್ಸ್‌ಗಳಿಂದ ಅದ್ಭುತ ಪ್ರೀತಿ ಪಡೆಯುತ್ತಿರುವ ಕಾಂತಾರ ಚಾಪ್ಟರ್ 1 ಸಿನಿಮಾ ಮೂಲಕ ಕೆನಡಾ ಮೂಲದ ಭಾರತೀಯ ಗಾಯಕ ಅಬ್ಬಿ ವಿ ಕನ್ನಡಕ್ಕೆ ಎಂಟ್ರಿ ಕೊಟ್ಟಿದ್ದಾರೆ.

ಕಾಂತಾರ 1 ಸಿನಿಮಾದ ಬ್ರಹ್ಮಕಲಶ ಸಿನಿಮಾ ಹಾಡಿಗೆ ಸಂಗೀತ ಪ್ರಿಯರು ತಲೆದೂಗಿದ್ದಾರೆ. ಶಿವನ ಕುರಿತಾದ ಈ ಹಾಡಿಗೆ ಶಶಿರಾಜ್ ಕಾವೂರ್ ಸಾಹಿತ್ಯ ಬರೆದಿದ್ದು , ಕನ್ನಡ ಜತೆಗೆ ಹಿಂದಿ, ಮಲಯಾಳಂ, ತೆಲುಗು ಮತ್ತು ತಮಿಳಿನಲ್ಲೂ ಈ ಹಾಡು ರಿಲೀಸ್ ಆಗಿದೆ. ಮಲಯಾಳಂ ಹೊರತುಪಡಿಸಿ ಉಳಿದೆಲ್ಲ ಭಾಷೆಗಳಿಗೆ ಅಬ್ಬಿ ವಿ. ಧ್ವನಿ ನೀಡಿದ್ದಾರೆ. ಅಬ್ಬಿ ವಿ, ಕೆನಡಾ ಮೂಲದ ಭಾರತೀಯ ಗಾಯಕ, ಗೀತರಚನೆಕಾರ, ಮತ್ತು ಸಂಯೋಜಕ. ಗ್ರ್ಯಾಮಿ ವಿಜೇತ ರಿಕಿ ಕೇಜ್ ಅವ ಸಹಯೋಗದೊಂದಿಗೆ "ಆರಂಭ್" ಎಂಬ ಆಲ್ಬಂ ಬಿಡುಗಡೆ ಮಾಡಿದ್ದಾರೆ. ಶಂಕರ್ ನಿರ್ದೇಶನದ ಇಂಡಿಯನ್ 2 ಚಿತ್ರದ ಹಾಡೊಂದಕ್ಕೆ ಧ್ವನಿಯಾಗುವ ಮೂಲಕ ಸಿನಿಮಾ ಜಗತ್ತಿಗೆ ಎಂಟ್ರಿ ಕೊಟ್ಟಿದ್ದಾರೆ.

**ಯಾರು ಅಬ್ಬಿ ವಿ:** ಅವರ ನಿಜವಾದ ಹೆಸರು ಅಭಿಷೇಕ್ ವೆಂಕಟ್. ಕೆನಡಾದಲ್ಲಿ ನೆಲೆಸಿರುವ ಭಾರತೀಯ ಕುಟುಂಬದಲ್ಲಿ ಜನಿಸಿದ ಅಬ್ಬಿ ಬಾಲ್ಯದಲ್ಲೇ ಸಂಗೀತ ಅಭ್ಯಾಸ ಆರಂಭಿಸಿದ್ದರು. ಅವರ ತಂದೆ ವೆಂಕಟ್ ಕೂಡ ಶಾಸ್ತ್ರೀಯ ಸಂಗೀತ ಅಭ್ಯಾಸ ಮಾಡಿದ್ದಾರೆ. ಟೊರೆಂಟೊದಲ್ಲಿ ಹುಟ್ಟಿ ಬೆಳೆದ ಅಭಿ ಕರ್ನಾಟಕ ಮತ್ತು ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತದಲ್ಲಿ ಪರಿಣಿತಿ ಹೊಂದಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಜನಪ್ರಿಯರಾಗಿರುವ, ಲಕ್ಷಾಂತರ ಫಾಲೋವರ್ಸ್ ಹೊಂದಿರುವ ಅಭಿ ಆಗಾಗ ತಮ್ಮ ಹಾಡಿನ ವಿಡಿಯೊ ಪೋಸ್ಟ್ ಮಾಡುತ್ತಲೇ ಇರುತ್ತಾರೆ. ಅವರು ತಮ್ಮ ತಂದೆಯೊಂದಿಗೆ ಸೇರಿ ಹಾಡಿರುವ ವಿಡಿಯೊ ಇಂಟರ್‌ನೆಟ್‌ನಲ್ಲಿ ಸದ್ದು ಮಾಡುತ್ತಿವೆ. ವಿವಿಧ ದೇಶಗಳಲ್ಲಿ ಅಭಿ ಸಂಗೀತ ಕಾರ್ಯಕ್ರಮ ನೀಡಿದ್ದಾರೆ.

2019ರಲ್ಲಿ ಭಾರತಕ್ಕೆ ಬಂದಿದ್ದ ಅಭಿ ಇಲ್ಲಿನ ಸಂಗೀತ, ರಾಗಗಳಿಗೆ ಮನಸೋತು ಕೆನಡಾಕ್ಕೆ ತೆರಳಿದ ಬಳಿಕ ಹೊಸದೊಂದು ಸಾಹಸಕ್ಕೆ ಕೈ ಹಾಕಿದರು. ಶಾಸ್ತ್ರೀಯ ಸಂಗೀತದ 73 ರಾಗಗಳನ್ನು 13 ನಿಮಿಷಗಳಲ್ಲಿ ಪರಿಚಯಿಸಿದರು. ಈ ವಿಡಿಯೊ ಯೂಟ್ಯೂಬ್‌ನಲ್ಲಿ ಲಕ್ಷಾಂತರ ವೀಕ್ಷಣೆ ಕಂಡಿದೆ.

ಇದೀಗ ಅವರು ಕಾಂತಾರ: ಚಾಪ್ಟರ್ 1 ಮೂಲಕ ಸ್ಯಾಂಡಲ್‌ವುಡ್‌ಗೆ ಕಾಲಿಟ್ಟಿದ್ದಾರೆ. ಇಂತಹದ್ದೊಂದು ಅವಕಾಶ ನೀಡಿದ್ದಕ್ಕೆ ಅವರು ಚಿತ್ರತಂಡಕ್ಕೆ ಧನ್ಯವಾದ ಅರ್ಪಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಆಘಾತ – ಪರೀಕ್ಷಾ ಶುಲ್ಕವನ್ನು ರಾಜ್ಯ ಸರ್ಕಾರ 710 ರೂ. ಹೆಚ್ಚಿಸಿದೆ




ಬೆಂಗಳೂರು: 2025-26 ಶೈಕ್ಷಣಿಕ ವರ್ಷದಿಂದ ಎಸ್‌ಎಸ್‌ಎಲ್‌ಸಿ (SSLC) ಪರೀಕ್ಷಾ ಶುಲ್ಕವನ್ನು 5% ಹೆಚ್ಚಿಸುವ ಮೂಲಕ ರಾಜ್ಯ ಸರ್ಕಾರ ವಿದ್ಯಾರ್ಥಿ ಮತ್ತು ಪೋಷಕರಿಗೆ ದೊಡ್ಡ ಆಘಾತ ಕೊಟ್ಟಿದೆ. ಕರ್ನಾಟಕ ಶಾಲಾ ಪರೀಕ್ಷಾ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಈ ಬದಲಾವಣೆಗೆ ಅನುಮೋದನೆ ನೀಡಿ ಆದೇಶ ಹೊರಡಿಸಿದೆ.

ಈ ಹೊಸ ಶುಲ್ಕ ವಿನ್ಯಾಸವು ಎಲ್ಲಾ ವರ್ಗದ ವಿದ್ಯಾರ್ಥಿಗಳ ಮೇಲೆ ಪ್ರಭಾವ ಬೀರಲಿದೆ. ಪ್ರಥಮ ಬಾರಿಗೆ ಪರೀಕ್ಷೆಗೆ ಬರುವ ನಿಯಮಿತ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಹಳೆಯ 676 ರೂಪಾಯಿಯಿಂದ ಹೆಚ್ಚಿಸಿ 710 ರೂಪಾಯಿಗೆ ಏರಿಕೆ ಮಾಡಲಾಗಿದೆ. ಇದರೊಂದಿಗೆ ಖಾಸಗಿ ಅಭ್ಯರ್ಥಿಗಳ ನೋಂದಣಿ ಮತ್ತು ಪರೀಕ್ಷಾ ಶುಲ್ಕದಲ್ಲೂ ಸರಿಪಡಿಕೆ ಮಾಡಲಾಗಿದೆ. ಹೊಸದಾಗಿ ನೋಂದಣಿ ಮಾಡಿಕೊಳ್ಳುವ ಖಾಸಗಿ ಅಭ್ಯರ್ಥಿಗಳಿಗೆ, ನೋಂದಣಿ ಮತ್ತು ಅರ್ಜಿ ಶುಲ್ಕವನ್ನು 236 ರೂಪಾಯಿಯಿಂದ 248 ರೂಪಾಯಿಗೆ ಏರಿಕೆ ಮಾಡಲಾಗಿದೆ. ಇದೇ ವೇಳೆ, ಈಗಾಗಲೇ ನೋಂದಣಿಯಾಗಿ ಪರೀಕ್ಷಾ ಶುಲ್ಕ ಪಾವತಿಸಿದ ಅಭ್ಯರ್ಥಿಗಳ ನೋಂದಣಿ ನವೀಕರಣ ಶುಲ್ಕ 69 ರೂಪಾಯಿಯಿಂದ 72 ರೂಪಾಯಿಗೆ ಹೆಚ್ಚಾಗಿದೆ.

ಪುನರಾವರ್ತಿತ ಶಾಲಾ ಮತ್ತು ಖಾಸಗಿ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಕೂಡಾ ಪರಿಷ್ಕರಿಸಲಾಗಿದೆ. ಇನ್ನು ಒಂದೇ ವಿಷಯಕ್ಕೆ ಪರೀಕ್ಷೆ ಬರೆಯುವ ಅಭ್ಯರ್ಥಿಗಳು 427 ರೂಪಾಯಿ ಬದಲಾಗಿ 448 ರೂಪಾಯಿ ಪಾವತಿಸಬೇಕಾಗುತ್ತದೆ. ಎರಡು ವಿಷಯಗಳಿಗೆ ಪರೀಕ್ಷೆ ಬರೆಯುವವರು 532 ರೂಪಾಯಿ ಬದಲಾಗಿ 559 ರೂಪಾಯಿ ಪಾವತಿಸಬೇಕಾಗುತ್ತದೆ. ಮೂರು ಮತ್ತು ಮೂರಕ್ಕಿಂತ ಹೆಚ್ಚು ವಿಷಯಗಳಿಗೆ ಪರೀಕ್ಷೆ ಬರೆಯುವ ಅಭ್ಯರ್ಥಿಗಳ ಶುಲ್ಕ 716 ರೂಪಾಯಿಯಿಂದ ಹೆಚ್ಚಿಸಿ 752 ರೂಪಾಯಿಗೆ ಏರಿಕೆ ಮಾಡಲಾಗಿದೆ.

# ವಕೀಲರೊಬ್ಬರ ಪತ್ನಿಗೆ ಕಬ್ಬಿಣದ ರಾಡಿನಿಂದ ಮಾರಣಾಂತಿಕ ಹಲ್ಲೆ

**ಕೆ.ಆರ್.ಪೇಟೆ:** ವಕೀಲರೊಬ್ಬರ ಪತ್ನಿಗೆ ಕಬ್ಬಿಣದ ರಾಡಿನಿಂದ ಮಾರಣಾಂತಿಕ ಹಲ್ಲೆ ನಡೆಸಿ, ಮೈಮೇಲೆ ಪೆಟ್ರೋಲ್ ಮತ್ತು ಸೀಮೆಎಣ್ಣೆ ಸುರಿದು ಜೀವಂತ ದಹನ ಮಾಡಲು ಯತ್ನಿಸಿರುವ ಘಟನೆ ಕೆ.ಆರ್.ಪೇಟೆ ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಮಾಂಬಹಳ್ಳಿ ಗ್ರಾಮದಲ್ಲಿ ನಡೆದಿದೆ.

ಮಾಂಬಹಳ್ಳಿ ಗ್ರಾಮದ ವಕೀಲ ದಿ.ಕುಚೇಲೇಗೌಡ ಅವರ ಪತ್ನಿ ಸುಲೋಚನ(41) ಗಂಭೀರವಾಗಿ ಗಾಯಗೊಂಡು ಕೆ.ಆರ್.ಪೇಟೆ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ.



ಅದೇ ಗ್ರಾಮದ ಪರಶಿವ, ಪವಿತ್ರ, ಯತೀಶ, ಯಶೋಧ, ಕುಮಾರಿ ಅವರುಗಳು ಮಾರಣಾಂತಿಕ ಮಾಡಿ ಜೀವಂತ ದಹಿಸಲು ಯತ್ನಿಸಿದ ಆರೋಪಿಗಳಾಗಿದ್ದಾರೆ.

**ಘಟನೆಯ ವಿವರ:** ಇಬ್ಬರು ಹೆಣ್ಣು ಮಕ್ಕಳನ್ನು ಓದಿಸಿಕೊಂಡು ಮಾಂಬಹಳ್ಳಿ ಗ್ರಾಮದಲ್ಲಿ ತಮ್ಮ ಮನೆಯಲ್ಲಿ ವಾಸವಿದ್ದ ದಿವಂಗತ ವಕೀಲ ಕುಚೇಲೇಗೌಡ ಅವರ ಪತ್ನಿ ಸುಲೋಚನ ಎಂಬುವವರ ಮನೆಗೆ ಏಕಾಏಕಿ ನುಗ್ಗಿರುವ ಆರೋಪಿಗಳು ಅತ್ತೆಗೆ ಎಂಬುದನ್ನೂ ನೋಡದೇ ಕಬ್ಬಿಣದ ರಾಡಿನಿಂದ ತಲೆಯ ಭಾಗಕ್ಕೆ , ಮರ್ಮಾಂಗಕ್ಕೆ , ಕೈ, ಕಾಲು, ಬೆನ್ನು ಸೇರಿದಂತೆ ಇತರೆ ಭಾಗಗಳಿಗೆ ಮನಬಂದAತೆ ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದಾರೆ. ಅಷ್ಟೇ ಅಲ್ಲದೇ ಮೊದಲೇ ಪ್ಲಾನ್ ಮಾಡಿಕೊಂಡಿದ್ದ ಆರೋಪಿಗಳು ಕಾರಿನಿಂದ ಪೆಟ್ರೋಲ್ ಮತ್ತು ಸೀಮೆಎಣ್ಣೆ ತಂದು ಸುಲೋಚನ ಅವರ ಮೈಮೇಲೆ ಸುರಿದು ಜೀವಂತವಾಗಿ ದಹಿಸುವ ಪ್ರಯತ್ನ ಮಾಡಿದ್ದಾರೆ. ಬೆಂಕಿ ಹಚ್ಚುವುದರೊಳಗೆ ಪುತ್ರಿ ಹರ್ಷವರ್ಧಿನಿಗೌಡ ಎಂಬಾಕೆ ಸಹಾಯಕ್ಕಾಗಿ ಕಿರುಚಿಕೊಂಡಾಗ ಗ್ರಾಮಸ್ಥರು ಬಂದು ಬೆಂಕಿ ಹಚ್ಚುವುದನ್ನು ತಪ್ಪಿಸಿದ್ದಾರೆ. ತಲೆಗೆ ಭಾಗಕ್ಕೆ ಕಬ್ಬಿಣದ ರಾಡಿನಿಂದ ಗಂಭೀರವಾದ ಹಲ್ಲೆಯಿಂದಾಗಿ ಸುಮಾರು ಅರ್ಧ ಲೀಟರ್‌ಗೂ ಹೆಚ್ಚು ರಕ್ತ ಸ್ರಾವ ಉಂಟಾಗಿದ್ದು , ಸುಲೋಚನ ತೀವ್ರ ಗಾಯಗೊಂಡು ಅಸ್ವಸ್ಥಗೊಂಡಿದ್ದರು. ಗ್ರಾಮಸ್ಥರು ಆರೋಪಿಗಳಿಂದ ಸುಲೋಚನಾ ಅವರನ್ನು ರಕ್ಷಿಸಿ, ತಕ್ಷಣ 108ಆಂಬುಲೆನ್ಸ್ ಮೂಲಕ ಕೆ.ಆರ್.ಪೇಟೆ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಿರುತ್ತಾರೆ.

ತಲೆಯ ನೆತ್ತಿನ ಭಾಗದಲ್ಲಿ ಸುಮಾರು 9ಇಂಚು ಮಾರಣಾಂತಿಕ ಗಾಯಗಳಾಗಿದ್ದು, ತಲೆಯು ವೈದ್ಯರ ಸಲಹೆಯ ಮೇರೆಗೆ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ನಂತರ ಹೆಚ್ಚಿನ ಗಾಯಗಳು ಉಂಟಾಗಿರುವ ಕಾರಣ ಕೆ.ಆರ್.ಪೇಟೆಯ ತಾಲ್ಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು , ಸಾವು ಬದುಕಿನ ನಡುವೆ ಹೋರಾಟ ಮಾಡುತ್ತಿದ್ದಾರೆ ಆದರೂ ಸಹ ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸರು, ಆರೋಪಿಗಳೊಂದಿಗೆ ಶಾಮೀಲಾಗಿ, ಆರೋಪಿಗಳನ್ನು ರಕ್ಷಣೆ ಮಾಡುವಂತಹ ಸೆಕ್ಷನ್ ನೊಂದಿಗೆ ಎಫ್.ಐ.ಆರ್ ಹಾಕಿ ಕೈತೊಳೆದುಕೊಂಡು ನಮ್ಮ ಕಣ್ಣೊರೆಸುವ ತಂತ್ರ ಮಾಡಿದ್ದಾರೆ ಎಂದು ವಕೀಲ ದಿ.ಕುಚೇಲೇಗೌಡ-ಸುಲೋಚನ ದಂಪತಿಗಳ ಪುತ್ರಿ ಯಶಸ್ವಿನಿಗೌಡ ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ನೋವು ತೋಡಿಕೊಂಡು ಗಂಭೀರ ಆರೋಪ ಮಾಡಿದ್ದಾರೆ.

ಕೂಡಲೇ ಗ್ರಾಮಾಂತರ ಪೊಲೀಸರು ಆರೋಪಿಗಳನ್ನು ಬಂಧಿಸಬೇಕು, ತಮ್ಮ ಸೇವೆಯ ಅವಧಿಯಲ್ಲಿ ಬಡವರಿಗೆ, ನೊಂದವರಿಗೆ ಉಚಿತ ಕಾನೂನು ನೆರವು ನೀಡುತ್ತಿದ್ದ ಮೃತ ವಕೀಲನ ಕುಟುಂಬಕ್ಕೆ ರಕ್ಷಣೆ ನೀಡಬೇಕು. ಮಾರಣಾಂತಿಕ ಹಲ್ಲೆ ನಡೆಸಿ ಜೀವಂತ ದಹನಕ್ಕೆ ಯತ್ನಿಸಿರುವ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಈ ಮೂಲಕ ಕರ್ನಾಟಕ ಪೊಲೀಸರಿಗೆ ಇರುವ ಒಳ್ಳೆಯ ಹೆಸರನ್ನು ಉಳಿಸಬೇಕು ಎಂದು ತಾಲ್ಲೂಕಿನ ವಿವಿಧ ಪ್ರಗತಿ ಪರ ಸಂಘಟನೆಗಳ ಪದಾಧಿಕಾರಿಗಳು ಉನ್ನತ ಪೊಲೀಸ್ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ. ಅ.11ಕ್ಕೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಿಂದ ಸುಲೋಚನಾ ಬೇಟಿ: ಇದೇ ಅ.11ರಂದು ಕೆ.ಆರ್.ಪೇಟೆ ಪಟ್ಟಣಕ್ಕೆ ಆಗಮಿಸಲಿರುವ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌದರಿ ಅವರು ಮಾರಣಾಂತಿಕ ಹಲ್ಲೆಗೆ ಒಳಗಾಗಿ ಕೆ.ಆರ್.ಪೇಟೆ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಕೀಲರ ಕುಚೇಲೇಗೌಡರ ಪತ್ನಿ ಸುಲೋಚನಾ ಅವರನ್ನು ಬೇಟಿ ಮಾಡಿ ಸಾಂತ್ವನ ಹೇಳಿ ದರ್ಯ ತುಂಬಲಿದ್ದಾರೆ ಎಂದು ರಾಜ್ಯ ಮಹಿಳಾ ಆಯೋಗದ ಕಚೇರಿಯ ಮೂಲಗಳು ತಿಳಿಸಿವೆ.

# ಕನ್ನಡ ಬಿಗ್ ಬಾಸ್ ಶೋ ಸ್ಥಗಿತಗೊಳಿಸಲು ಮಾಲಿನ್ಯ ಮಂಡಳಿಯಿಂದ ನೋಟಿಸ್




ಕನ್ನಡದ ಜನಪ್ರಿಯ ರಿಯಾಲಿಟಿ ಶೋ 'ಬಿಗ್ ಬಾಸ್ ಕನ್ನಡ ಸೀಸನ್ 12' ಆರಂಭದಲ್ಲೇ ಗಂಭೀರ ವಿವಾದದಲ್ಲಿ ಸಿಲುಕಿದೆ. ತ್ಯಾಜ್ಯ ವಿಲೇವಾರಿ ಸಂಬಂಧಿತ ನಿಯಮಗಳನ್ನು ಉಲ್ಲಂಘಿಸಿದ ಆರೋಪದ ಮೇರೆಗೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (KSPCB) ಜಾಲಿವುಡ್ ಸ್ಟುಡಿಯೋಗೆ ನೋಟಿಸ್ ಜಾರಿ ಮಾಡಿದ್ದು , ಕಾನೂನು ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದೆ.

ಈ ಬಾರಿಯ ಬಿಗ್ ಬಾಸ್ ಮನೆ ಬಿಡದಿ ಸಮೀಪದ ಜಾಲಿವುಡ್ ಸ್ಟುಡಿಯೋ ಪ್ರದೇಶದಲ್ಲಿ ನಿರ್ಮಾಣಗೊಂಡಿದ್ದು, ಶೋ ಪ್ರಾರಂಭಗೊಂಡು ಕೆಲವೇ ವಾರಗಳು ಕಳೆದಿವೆ. ಒಟ್ಟು 19 ಮಂದಿ ಸ್ಪರ್ಧಿಗಳು ಮನೆಯೊಳಗೆ ಪ್ರವೇಶಿಸಿದ್ದರೆ, ಈಗಾಗಲೇ ಇಬ್ಬರು ಸ್ಪರ್ಧಿಗಳು ಹೊರಗುಳಿದಿದ್ದಾರೆ. ಮನೆಯೊಳಗಿನ ದೈನಂದಿನ ಚಟುವಟಿಕೆಗಳು, ಆಹಾರ ವ್ಯವಸ್ಥೆ , ಶೂಟಿಂಗ್ ಮತ್ತು ಸಿಬ್ಬಂದಿಯ ಕಾರ್ಯಗಳಿಂದಾಗಿ ದೊಡ್ಡ ಪ್ರಮಾಣದಲ್ಲಿ ತಾಜ್ಯ ಮತ್ತು ತ್ಯಾಜ್ಯ ನೀರು ಉತ್ಪತ್ತಿಯಾಗುತ್ತಿದೆ. ಆದರೆ, ಇದರ ಸರಿಯಾದ ಸಂಸ್ಕರಣೆ ಮತ್ತು ವಿಲೇವಾರಿ ನಡೆಯುತ್ತಿಲ್ಲವೆಂಬ ಗಂಭೀರ ಆರೋಪಗಳು ಎದುರಾಗಿವೆ. ಮಾಲಿನ್ಯ ನಿಯಂತ್ರಣ ಮಂಡಳಿಯ ವರದಿಯ ಪ್ರಕಾರ, ಜಾಲಿವುಡ್ ಸ್ಟುಡಿಯೋ ನಿರ್ವಹಣೆಯು ಶೋ ಪ್ರಾರಂಭಕ್ಕೂ ಮುನ್ನ ತಾಜ್ಯ ನೀರು ಸಂಸ್ಕರಣ ಘಟಕ (STP) ನಿರ್ಮಿಸಬೇಕಾಗಿತ್ತು. ಆದರೆ ಆ ಘಟಕವನ್ನು ಸ್ಥಾಪಿಸದಿರುವುದರಿಂದ, ಪರಿಸರ ಮಾಲಿನ್ಯ ಉಂಟಾಗುತ್ತಿರುವ ಸಾಧ್ಯತೆ ದೃಢಪಟ್ಟಿದೆ. ಇದರಿಂದಾಗಿ ಮಂಡಳಿ ತಕ್ಷಣದ ಕ್ರಮವಾಗಿ ನೋಟಿಸ್ ನೀಡಿದ್ದು, "ಪರಿಸರ ಕಾಯ್ದೆ ಉಲ್ಲಂಘನೆ ಮುಂದುವರೆದರೆ ಸ್ಟುಡಿಯೋ ಬಂದ್ ಮಾಡಲಾಗುತ್ತದೆ" ಎಂದು ಎಚ್ಚರಿಕೆ ನೀಡಿದೆ. ಶೋ ನಡೆಯುತ್ತಿರುವ ಸ್ಟುಡಿಯೋ ಒಂದು ಅಮ್ಯೂಸ್‌ಮೆಂಟ್ ಪಾರ್ಕ್ ಆಗಿದ್ದು, ಅದರೊಳಗೆ ದೈನಂದಿನ ನೂರಾರು ಮಂದಿ ತಂತ್ರಜ್ಞರು ಮತ್ತು ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ. ದೊಡ್ಡ ಪ್ರಮಾಣದ ನೀರು, ಪೇಪರ್ ತಟ್ಟೆ, ಪ್ಲಾಸ್ಟಿಕ್ ವಸ್ತುಗಳು ಮತ್ತು ಆಹಾರ ತ್ಯಾಜ್ಯ ದಿನವೂ ಹೊರಬರುತ್ತಿರುವುದಾಗಿ ವರದಿಗಳು ಹೇಳುತ್ತವೆ. ಈ ತ್ಯಾಜ್ಯವನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡದೇ ನೇರವಾಗಿ ಹೊರಗೆ ಬಿಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಮಂಡಳಿಗೆ ಬಂದಿವೆ.

ಹಿಂದಿನ ಸೀಸನ್‌ನಲ್ಲಿಯೂ ಬಿಗ್ ಬಾಸ್ ಆಯೋಜಕರು ವಿವಾದಕ್ಕೆ ಒಳಗಾಗಿದ್ದರು. ಮಹಿಳಾ ಆಯೋಗವು ಆ ಸಮಯದಲ್ಲಿ ಕೆಲವು ದೃಶ್ಯಗಳ ಕುರಿತು ನೋಟಿಸ್ ನೀಡಿತ್ತು. ಈಗ ಮತ್ತೊಮ್ಮೆ ಮಾಲಿನ್ಯ ನಿಯಂತ್ರಣ ಮಂಡಳಿಯ ನೋಟಿಸ್ ಶೋ ಆಯೋಜಕರಿಗೆ ಹೊಸ ತಲೆನೋವನ್ನು ಉಂಟುಮಾಡಿದೆ. ಈ ಹಿನ್ನೆಲೆಯಲ್ಲಿ ಮಂಡಳಿಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಶೋ ಆಯೋಜಕರಿಗೆ ತಕ್ಷಣದ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಅವರು ತಾಜ್ಯ ನೀರು ಸಂಸ್ಕರಣ ಘಟಕವನ್ನು ನಿರ್ಮಿಸಿ, ಪರಿಸರ ಮಾನದಂಡಗಳಿಗೆ ಅನುಗುಣವಾಗಿ ಕಾರ್ಯಾಚರಿಸುವ ನಿಬಂಧನೆ ವಿಧಿಸಿದ್ದಾರೆ. ಒಂದು ವೇಳೆ ಈ ನಿಬಂಧನೆಗಳನ್ನು ಪಾಲಿಸಲು ವಿಫಲವಾದರೆ, ಬಿಗ್ ಬಾಸ್ ಮನೆಯ ಶೂಟಿಂಗ್ ನಿಲ್ಲಿಸಲು ಬಾಧ್ಯರಾಗಬೇಕಾಗುತ್ತದೆ ಎಂದು ಸೂಚಿಸಲಾಗಿದೆ.



ಈ ಬೆಳವಣಿಗೆಯಿಂದಾಗಿ 'ಬಿಗ್ ಬಾಸ್ ಕನ್ನಡ ಸೀಸನ್ 12' ಆರಂಭದ ಕೆಲವು ವಾರಗಳಲ್ಲೇ ಸಂಕಷ್ಟಕ್ಕೆ ಸಿಲುಕಿದೆ. ಅಭಿಮಾನಿಗಳಲ್ಲಿ ಕುತೂಹಲ ಮೂಡಿಸಿರುವ ಈ ಶೋ ಮುಂದುವರಿಯಬಹುದೇ ಅಥವಾ ತಾತ್ಕಾಲಿಕವಾಗಿ ಸ್ಥಗಿತಗೊಳ್ಳಬಹುದೇ ಎಂಬುದು ಈಗ ಪ್ರಶ್ನೆಯಾಗಿದೆ. ಬಿಗ್ ಬಾಸ್ ಆಯೋಜಕರು ಮಾಲಿನ್ಯ ನಿಯಂತ್ರಣ ಮಂಡಳಿಯ ನೋಟಿಸ್‌ಗೆ ಹೇಗೆ ಪ್ರತಿಕ್ರಿಯಿಸುತ್ತಾರೆ ಮತ್ತು ಪರಿಸರ ಕಾಯ್ದೆ ಪಾಲನೆಗೆ ಏನೆಲ್ಲ ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಕಾದು ನೋಡಬೇಕಾಗಿದೆ. ಈ ಘಟನೆ ಮನರಂಜನಾ ಕ್ಷೇತ್ರದಲ್ಲಿಯೂ ಪರಿಸರ ಜವಾಬ್ದಾರಿಯ ಮಹತ್ವವನ್ನು ಮತ್ತೆ ಒತ್ತಿ ಹೇಳುವಂತಾಗಿದೆ.

# ದರ್ಶನ್ ಜೈಲು ವಿವಾದ: ಸೌಲಭ್ಯ ನೀಡದ ಜೈಲಾಧಿಕಾರಿಗಳ ವಿರುದ್ಧ ಕೋರ್ಟ್‌ನಲ್ಲಿ ಕೇಸ್



ಬೆಂಗಳೂರು: ನಟ ದರ್ಶನ್, ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಪ್ಪನ ಅಗ್ರಹಾರದ ಕೇಂದ್ರೀಯ ಕಾರಾಗೃಹದಲ್ಲಿ ಬಂಧಿಯಾಗಿದ್ದಾರೆ. ದರ್ಶನ್‌ಗೆ ಜೈಲಿನಲ್ಲಿಯೇ ಹೆಚ್ಚುವರಿ ಹಾಸಿಗೆ, ತಲೆದಿಂಬು ಸೇರಿದಂತೆ ಕೆಲವು ಸವಲತ್ತುಗಳನ್ನು ನೀಡುವಂತೆ ನೀಡಲಾಗಿದ್ದ ನ್ಯಾಯಾಲಯದ ಆದೇಶವನ್ನು ಜೈಲ್ ಅಧಿಕಾರಿಗಳು ಪಾಲಿಸಿಲ್ಲ ಎಂದು ಆರೋಪಿಸಲಾಗಿದೆ. ಈ ಆರೋಪಗಳ ಹಿನ್ನೆಲೆಯಲ್ಲಿ, ದರ್ಶನ್ ಪರ ವಕೀಲರು ಬೆಂಗಳೂರಿನ 57ನೇ ಸಿವಿಲ್ ಕೋರ್ಟ್ (ಸಿಸಿ ಹೆಚ್ ಕೋರ್ಟ್)ಗೆ ಅರ್ಜಿ ಸಲ್ಲಿಸಿದ್ದಾರೆ. ಈ ಅರ್ಜಿಯಲ್ಲಿ, ಜೈಲ್ ಅಧಿಕಾರಿಗಳು ನ್ಯಾಯಾಲಯದ ಆದೇಶವನ್ನು ಸ್ಪಷ್ಟವಾಗಿ ಉಲ್ಲಂಘಿಸಿದ್ದಾರೆ ಎಂದುತಿಳಿಸಿದ್ದಾರೆ. ದರ್ಶನ್‌ಗೆ ಯಾವುದೇ ರೀತಿಯ ಸವಲತ್ತು ನೀಡಲಾಗಿಲ್ಲ ಎಂಬ ವಿಷಯವನ್ನು ಖುದ್ದು ಜೈಲಿನಲ್ಲಿ ಪರಿಶೀಲಿಸಿ, ಅಗತ್ಯ ಕಾನೂನು ಕ್ರಮ ಕೈಗೊಳ್ಳುವಂತೆ ಕೋರ್ಟ್‌ನಲ್ಲಿ ಕೋರಿಕೆ ನೀಡಲಾಗಿದೆ. ಈ ಅರ್ಜಿಯ ವಿಚಾರಣೆಯನ್ನು ಕೋರ್ಟ್ ಅಕ್ಟೋಬರ್ 9ಕ್ಕೆ ಕಾಯ್ದಿರಿಸಿದೆ. ವಕೀಲ ಸುನೀಲ್ ,ಸಿಆರ್ ಪಿಸಿ ಸೆಕ್ಷನ್ 310 ರ ಅಡಿಯಲ್ಲಿ ಸಲ್ಲಿಸಿದ ಈ ಅರ್ಜಿಯು, ದರ್ಶನ್‌ಗೆ ಸವಲತ್ತುಗಳನ್ನು ನೀಡುವಂತೆ ನೀಡಲಾಗಿದ್ದ ನ್ಯಾಯಾಲಯದ ಆದೇಶವನ್ನು ಜೈಲ್ ಅಧಿಕಾರಿಗಳು ಪೂರ್ತಿ ನಿರ್ಲಕ್ಷಿಸಿದ್ದಾರೆ ಎಂಬುದು ಅರ್ಜಿಯ ಮುಖ್ಯ ವಾದವಾಗಿದೆ. ಜೈಲು ನಿಯಮಾವಳಿಗಳು ಮತ್ತು ಕೈದಿಗಳ ಹಕ್ಕುಗಳ ಸಂದರ್ಭದಲ್ಲಿ, ನ್ಯಾಯಾಲಯದ ಆದೇಶಗಳನ್ನು ಪಾಲಿಸುವುದು ಜೈಲ್ ಆಡಳಿತದ ಕಡ್ಡಾಯ ಕರ್ತವ್ಯವಾಗಿದೆ.

# ಯಾವ ಜಾತಿಯನ್ನೂ ತುಳಿಯುವ ಪ್ರಶ್ನೆಯಿಲ್ಲ:ಸಿಎಂ

**ಕೊಪ್ಪಳ:** ಜನರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಲ್ಲಿ ಯಾವ ಜಾತಿಯವರನ್ನು ತುಳಿಯುವ ಪ್ರಶ್ನೆಯಿಲ್ಲ. ಸಮಸಮಾಜವನ್ನು ಬಯಸದವರು ಸಮೀಕ್ಷೆಯನ್ನು ವಿರೋಧಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ಕೊಪ್ಪಳದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಮೇಲ್ಜಾತಿಗಳನ್ನು ತುಳಿಯಲು ಸಮೀಕ್ಷೆ ನಡೆಸಲಾಗುತ್ತಿದೆ ಎಂಬ ಕೇಂದ್ರ ಸಚಿವ ಸೋಮಣ್ಣ ಆರೋಪಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಜನರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯನ್ನು ನಡೆಸದಿದ್ದರೆ, ಸಮಾಜದಲ್ಲಿ ಜನರ ಸ್ಥಿತಿಗತಿ ಬಗ್ಗೆ ಅರಿಯಲು ಸಾಧ್ಯವಿಲ್ಲ. ಈ ಸಮೀಕ್ಷೆಯಲ್ಲಿ ಯಾವ ಜಾತಿಯವರನ್ನು ತುಳಿಯುವ ಪ್ರಶ್ನೆಯಿಲ್ಲ. ಸಮಸಮಾಜ ನಿರ್ಮಾಣವನ್ನು ವಿರೋಧಿಸುವವರು ಇಂತಹ ಹೇಳಿಕೆಗಳನ್ನು ನೀಡುವ ಮೂಲಕ ಜನರ ದಾರಿ ತಪ್ಪಿಸುತ್ತಿದ್ದಾರೆ. ಈಗಾಗಲೇ 1.10 ಕೋಟಿ ಕುಟುಂಬಗಳ ಸಮೀಕ್ಷಾ ಕಾರ್ಯ ಮುಗಿದಿದ್ದು, ನಿನ್ನೆವರೆಗೆ ಶೇ.63 ರಷ್ಟು ಸರ್ವೇ ಕಾರ್ಯ ಪ್ರಗತಿಯಾಗಿದೆ. ನಾಳೆ ಸಂಜೆವರೆಗೆ ಸಮೀಕ್ಷೆಯ ಪ್ರಗತಿಯನ್ನು ಪರಿಶೀಲಿಸಿ, ಸಮೀಕ್ಷೆ ಅವಧಿ ವಿಸ್ತರಣೆ ಬಗ್ಗೆ ತೀರ್ಮಾನಕ್ಕೆಗೊಳ್ಳಲಾಗುವುದು ಎಂದರು

ಕೊಪ್ಪಳದಲ್ಲಿ ಶೇ.97ರಷ್ಟು ಸಮೀಕ್ಷೆ ಪೂರ್ಣ: ಕೊಪ್ಪಳ ಜಿಲ್ಲೆಯಲ್ಲಿ ಶೇ.97 ರಷ್ಟು ಸಮೀಕ್ಷೆ ಪೂರ್ಣಗೊಂಡಿದ್ದು, ಸಮಾಜದಲ್ಲಿ ಬದಲಾವಣೆಯನ್ನು ವಿರೋಧಿಸುವವರು ಸಮೀಕ್ಷೆಯ ವಿರುದ್ಧ ಧ್ವನಿ ಎತ್ತುತ್ತಿದ್ದಾರೆ ಎಂದರು. ಕೊಪ್ಪಳದಲ್ಲಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದಾ, ಕಡಿಮೆ ಅಂತರದಲ್ಲಿ ಸೋತಿದ್ದರೂ, ಕೊಪ್ಪಳದ ಜನ ತನ್ನನ್ನು ಆಶೀರ್ವದಿಸಿದ್ದರು ಎಂದು ಸ್ಮರಿಸಿದ ಮುಖ್ಯಮಂತ್ರಿಗಳು ಜನತೆಗೆ ಧನ್ಯವಾದಗಳನ್ನು ತಿಳಿಸಿದರು.

**ಬಲ್ಡೋಟಾ ಕಾರ್ಖಾನೆ** :ಬಲ್ಡೋಟಾ ಕಾರ್ಖಾನೆ ಯೋಜನೆ ಕುರಿತಂತೆ ಕೊಪ್ಪಳದಲ್ಲಿ ಹೋರಾಟಗಳು ನಡೆದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಬಲ್ಡೋಟಾ ಕಾರ್ಖಾನೆಯ ವಿಚಾರ ನ್ಯಾಯಾಲಯದಲ್ಲಿ ವಿಲೇ ಇದ್ದು, ತೀರ್ಪಿನ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ಪರಿಸರ ಮಾಲಿನ್ಯ ತಡೆಯಲು ಕ್ರಮ: ಎಂಎಸ್ ಪಿ ಎಲ್ ಸೇರಿದಂತೆ ವಿವಿಧ ಕೈಗಾರಿಕೆಗಳಿಂದ ಬರುವ ಧೂಳಿಂದ ಪರಿಸರ ಮಾಲಿನ್ಯವಾಗುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರದ ಕ್ರಮ ತೆಗೆದುಕೊಳ್ಳುತ್ತಿದೆಯೇ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಕಾರ್ಖಾನೆಗಳಿಂದ ಬರುವ ಧೂಳನ್ನು ಪರೀಕ್ಷೆ ನಡೆಸಿ, ಧೂಳು ಬರದಂತೆ ಕ್ರಮ ತೆಗೆದುಕೊಳ್ಳುವ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದರು.

ಕೇಂದ್ರ ಸರ್ಕಾರವೂ ಜಾತಿಗಣತಿ ನಡೆಸಲಿದೆ: ಕೇಂದ್ರ ಸಚಿವ ಪ್ರಹ್ಲಾದ್ ಜೋಷಿಯವರು ಸಮೀಕ್ಷೆಯಲ್ಲಿ ಪಾಲ್ಗೊಳ್ಳುವುದಿಲ್ಲ ಎಂದು ತಿಳಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಪ್ರಹ್ಲಾದ್ ಜೋಷಿಯವರು ಕೇಂದ್ರ ಸಚಿವರಾಗಿದ್ದಾರೆ. ಕೇಂದ್ರ ಸರ್ಕಾರ ನಡೆಸಲಿರುವ ಜಾತಿಗಣತಿಗೂ ವಿರೋಧ ವ್ಯಕ್ತಪಡಿಸುತ್ತಾರೆಯೇ ? ಎಂದು ಪ್ರಶ್ನಿಸಿದರು.

**ಲಿಂಗಾಯಿತ ಪ್ರತ್ಯೇಕ ಧರ್ಮ:** ಜನರೇ ನಿಲುವೇ ನನ್ನ ನಿಲುವು ಲಿಂಗಾಯತ ಧರ್ಮವನ್ನು ಪ್ರತ್ಯೇಕ ಧರ್ಮ ಎನ್ನುವ ಬಗ್ಗೆ ಮುಖ್ಯಮಂತ್ರಿಗಳ ನಿಲುವೇನು ಎಂಬ ಪ್ರಶ್ನೆಗೆ ಉತ್ತರಿಸಿ, ಜನರು ಸ್ವಯಂಪ್ರೇರಣೆಯಿಂದ ತಮ್ಮ ಧರ್ಮವನ್ನು ತಿಳಿಸಿದಂತೆ, ಸಮೀಕ್ಷಾಗಾರರು ಧರ್ಮವನ್ನು ನಮೂದಿಸಿಕೊಳ್ಳುತ್ತಾರೆ. ಈ ಬಗ್ಗೆ ಜನರ ನಿಲುವೇ ನನ್ನ ನಿಲುವು ಎಂದರು.

ಗ್ಯಾರಂಟಿಗಳು ಸಮರ್ಪಕವಾಗಿ ತಲುಪುತ್ತಿದೆ ಗ್ಯಾರಂಟಿಗಳು ಸಮರ್ಪಕವಾಗಿ ಜನರಿಗೆ ತಲುಪುತ್ತಿಲ್ಲ ಎಂಬುದಕ್ಕೆ ಉತ್ತರಿಸಿ, ಗ್ಯಾರಂಟಿಗಳನ್ನು ಸಮರ್ಪಕವಾಗಿ ತಲುಪಿಸಲಾಗುತ್ತಿದೆ ಎಂದರು. ಕೆಮ್ಮಿನ ಔಷಧಿ-ಎಚ್ಚರಿಕೆ ವಹಿಸುವಂತೆ ಇಲಾಖೆಗೆ ಸೂಚನೆ. ವಿವಿಧ ರಾಜ್ಯದಲ್ಲಿ ಕೆಮ್ಮಿನ ಔಷಧಿಯಿಂದ ಮಕ್ಕಳು ಅಸುನೀಗುತ್ತಿದ್ದು, ಈ ಬಗ್ಗೆ ರಾಜ್ಯಸರ್ಕಾರದ ಕ್ರಮವೇನು ಎಂಬುದಕ್ಕೆ ಉತ್ತರಿಸಿ, ಈ ಬಗ್ಗೆ ಗಮನಹರಿಸುವಂತೆ ಆರೋಗ್ಯ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದರು.

# ಗಾಂಜಾ ದಂಧೆ ಬಯಲು: ಹಲಸೂರು ಗೇಟ್ನಲ್ಲಿ 10 ಕೆಜಿ ಗಾಂಜಾ ಸೀಜ್



ಬೆಂಗಳೂರು:ರಾಜ್ಯ ರಾಜಧಾನಿ ಬೆಂಗಳೂರು ನಗರದಲ್ಲಿ ಕಳೆದ ಕೆಲ ತಿಂಗಳಿಂದ ಡ್ರಗ್ಸ್ ಮತ್ತು ಗಾಂಜಾ ದಂಧೆ ಪ್ರಕರಣಗಳು ಭಾರೀ ಪ್ರಮಾಣದಲ್ಲಿ ಬೆಳಕಿಗೆ ಬರುತ್ತಿವೆ. ನಗರದಲ್ಲಿನ ಯುವಜನತೆ ಮತ್ತು ಕಾಲೇಜು ವಿದ್ಯಾರ್ಥಿಗಳ ನಡುವೆ ಮಾದಕ ವಸ್ತುಗಳ ಬಳಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಪೊಲೀಸರು ವ್ಯಾಪಕವಾಗಿ ನಿಗಾವಹಿಸಿ ಕ್ರಮ ಕೈಗೊಂಡಿದ್ದಾರೆ. ಇತ್ತೀಚೆಗೆ ನಡೆಸಿದ ಶೋಧ ಕಾರ್ಯಾಚರಣೆಯಲ್ಲಿಯೇ ಐದು ಕೋಟಿ ರೂಪಾಯಿ ಮೌಲ್ಯದ ಡ್ರಗ್ಸ್‌ಗಳನ್ನು ವಶಪಡಿಸಿಕೊಂಡಿದ್ದರು. ಈಗ ಮತ್ತೊಂದು ದೊಡ್ಡ ಗಾಂಜಾ ಪ್ರಕರಣ ಹಲಸೂರು ಗೇಟ್ ಠಾಣಾ ವ್ಯಾಪ್ತಿಯಲ್ಲಿ ಬೆಳಕಿಗೆ ಬಂದಿದೆ.

ಫುಟ್‌ಪಾತ್‌ನಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿ ಬಂಧನ.ಹಲಸೂರು ಗೇಟ್ ಠಾಣೆಯ ಪೊಲೀಸರು ನಿಖರವಾದ ಸುಳಿವಿನ ಆಧಾರದ ಮೇಲೆ ಫುಟ್‌ಪಾತ್‌ನಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿ ಕುಶಾಲ್ ಎಂಬವನನ್ನು ಬಂಧಿಸಿದ್ದಾರೆ. ತನಿಖೆಯ ಪ್ರಕಾರ, ಕುಶಾಲ್ ನಗರದ ಕೆ.ಜಿ ರಸ್ತೆಯ ಫುಟ್‌ಪಾತ್‌ನಲ್ಲಿ 1ಕೆಜಿ ತೂಕದ ಗಾಂಜಾ ಮಾರಾಟ ಮಾಡಲು ಯತ್ನಿಸುತ್ತಿದ್ದಾಗಲೇ ಪೊಲೀಸರ ಬಲೆಗೆ ಸಿಕ್ಕಿಬಿದ್ದಿದ್ದಾನೆ. ಪ್ರಾಥಮಿಕ ವಿಚಾರಣೆಯಲ್ಲಿ, ಆತ ಮತ್ತೊಬ್ಬ ವ್ಯಕ್ತಿಯಿಂದ ಗಾಂಜಾ ಪಡೆಯುತ್ತಿದ್ದ ಹಾಗೂ ನಗರದಲ್ಲಿ ಸಣ್ಣ ಪ್ರಮಾಣದಲ್ಲಿ ಮಾರಾಟ ಮಾಡುತ್ತಿದ್ದಾನೆಂಬುದು ಬೆಳಕಿಗೆ ಬಂದಿದೆ.

ಪೊಲೀಸರ ಕಾರ್ಯಾಚರಣೆಯಲ್ಲಿ ಇನ್ನೂ 9 ಕೆಜಿ ಗಾಂಜಾ ಪತ್ತೆ. ಕುಶಾಲ್‌ನ ವಿಚಾರಣೆ ವೇಳೆ ಮತ್ತೊಬ್ಬ ಸಹಆರೋಪಿಯ ಮನೆಗೆ ಗಾಂಜಾ ಸಂಗ್ರಹಿಸಿದ್ದ ಮಾಹಿತಿ ಲಭ್ಯವಾಯಿತು. ತಕ್ಷಣವೇ ಪೊಲೀಸರು ಕೂಡಲೆ ಆ ಮನೆಯಲ್ಲಿ ದಾಳಿ ನಡೆಸಿ ಸುಮಾರು 9 ಕೆಜಿಯಷ್ಟು ಗಾಂಜಾ ವಶಪಡಿಸಿಕೊಂಡಿದ್ದಾರೆ. ಮನೆಯಲ್ಲಿದ್ದ ಶಂಕಿತ ವ್ಯಕ್ತಿ ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಸ್ತುತ ಒಬ್ಬನನ್ನು ಬಂಧಿಸಿರುವ ಹಲಸೂರು ಗೇಟ್ ಠಾಣೆಯ ಪೊಲೀಸರು ಪರಾರಿಯಾದ ಶಂಕಿತನ ಶೋಧಕಾರ್ಯ ಮುಂದುವರೆಸಿದ್ದಾರೆ.

ನಗರದಲ್ಲಿ ಗಾಂಜಾ ದಂಧೆಯ ನಿರಂತರ ಬಯಲು ಇದು ಬೆಂಗಳೂರಿನಲ್ಲಿ ನಡೆದ ಮೊದಲ ಪ್ರಕರಣವಲ್ಲ. ಈ ವರ್ಷ ಮಾತ್ರವೇ ನಗರದಲ್ಲಿ 60 ಕ್ಕೂ ಹೆಚ್ಚು ಮಾದಕ ವಸ್ತುಗಳ ಪ್ರಕರಣಗಳು ದಾಖಲಾಗಿವೆ. ಆಗಸ್ಟ್ ತಿಂಗಳಲ್ಲಿ ಜಾಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ, ಒಡಿಶಾದಿಂದ ಆಮದು ಮಾಡಲಾಗಿದ್ದ 41 ಕೆಜಿಯಷ್ಟು ಗಾಂಜಾ ಪತ್ತೆಯಾಗಿತ್ತು. ಈ ಪ್ರಕರಣದಲ್ಲಿ ಇಬ್ಬರು ಆರೋಪಿ ಬಂಧಿತರಾಗಿದ್ದರು. ಅದೇ ರೀತಿ ಆನೇಕಲ್ ತಾಲ್ಲೂಕಿನ ಕರ್ಪೂರು ಗ್ರಾಮದಲ್ಲಿ, ಪೊಲೀಸರು ಕೇರಳ ಮೂಲದ ಶಂಕಿತನಿಂದ 100 ಕೆಜಿ ಗಾಂಜಾ (ಮೌಲ್ಯ: ₹3 ಕೋಟಿ)ವಶಪಡಿಸಿಕೊಂಡಿದ್ದರು.

ಪೊಲೀಸರ ನಿರಂತರ ತಪಾಸಣೆ ಮತ್ತು ಶೋಧಕಾರ್ಯ

ಸಂಪಿಗೇಹಳ್ಳಿ, ಹೆಚ್‌ಎಸ್‌ಆರ್ ಲೇಔಟ್, ಯಲಹಂಕ ಸೇರಿದಂತೆ ಹಲವು ಪ್ರದೇಶಗಳಲ್ಲಿ ಸಿಸಿಬಿ (CCB) ಪೊಲೀಸರು ಕಳೆದ ತಿಂಗಳು ನಡೆಸಿದ ಕಾರ್ಯಾಚರಣೆಯ ವೇಳೆ ಸುಮಾರು ₹5 ಕೋಟಿ ಮೌಲ್ಯದ ವಿವಿಧ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದರು. ಈ ಕ್ರಮಗಳಿಂದಾಗಿ ನಗರದಲ್ಲಿ ನಶಾ ಮಾರಾಟದ ಚಟುವಟಿಕೆಗಳ ಮೇಲೆ ತಾತ್ಕಾಲಿಕ ಕಡಿವಾಣ ಬಿದ್ದಿದ್ದರೂ, ಹೊಸ ಹೊಸ ಮಾರ್ಗಗಳಲ್ಲಿ ಗಾಂಜಾ ವ್ಯಾಪಾರಿಗಳು ಚಟುವಟಿಕೆ ಮುಂದುವರೆಸುತ್ತಿದ್ದಾರೆ.

ಸಾಮಾಜಿಕ ಚಿಂತನೆ ಹೆಚ್ಚಾಗುತ್ತಿದೆ ನಗರದ ನಾಗರಿಕರಲ್ಲಿ ಗಾಂಜಾ ಮತ್ತು ಡ್ರಗ್ಸ್ ವ್ಯಾಪಾರವು ವೇಗವಾಗಿ ವಿಸ್ತರಿಸುತ್ತಿರುವುದು ಆತಂಕ ಮೂಡಿಸಿದೆ. ಕಾಲೇಜು ವಿದ್ಯಾರ್ಥಿಗಳು, ಯುವ ಉದ್ಯೋಗಿಗಳು ಈ ನಶಾ ದಂಧೆಯ ಪ್ರಮುಖ ಗುರಿಯಾಗುತ್ತಿದ್ದಾರೆ ಎನ್ನುವ ಆರೋಪಗಳೂ ಕೇಳಿಬರುತ್ತಿವೆ. ಪೊಲೀಸರು ಸಾಮಾಜಿಕ ಮಾಧ್ಯಮಗಳ ಮೂಲಕ ಯುವಕರಿಗೆ ಜಾಗೃತಿ ಮೂಡಿಸಲು ಮುಂದಾಗಿದ್ದಾರೆ.

ಹಲಸೂರು ಗೇಟ್ ಠಾಣೆಯ ಪೊಲೀಸರು ಈ ಪ್ರಕರಣದಲ್ಲಿ ತನಿಖೆ ಮುಂದುವರೆಸಿದ್ದು, ಪರಾರಿಯಾದ ಶಂಕಿತನ ಪತ್ತೆಗೆ ವಿಶೇಷ ತಂಡವನ್ನು ರಚಿಸಲಾಗಿದೆ. ಪೊಲೀಸರು ನಾಗರಿಕರನ್ನು ಸಹ ಮನವಿ ಮಾಡಿಕೊಂಡಿದ್ದು — ಯಾರಾದರೂ ತಮ್ಮ ಪ್ರದೇಶದಲ್ಲಿ ಸಂಶಯಾಸ್ಪದ ಚಟುವಟಿಕೆಗಳನ್ನು ಗಮನಿಸಿದರೆ ತಕ್ಷಣ ಮಾಹಿತಿ ನೀಡುವಂತೆ ಹೇಳಿದ್ದಾರೆ.

# ಡೇರಿ ಕಾರ್ಯದರ್ಶಿ ಮತ್ತು ಅಧ್ಯಕ್ಷರ ಮನೆ ಮುಂದೆ ಹಾಲು ಸುರಿದು ಪ್ರತಿಭಟನೆ



ಕೃಷ್ಣರಾಜಪೇಟೆ: ತಾಲ್ಲೂಕಿನ ಐಕನಹಳ್ಳಿ ಕೊಪ್ಪಲು ಗ್ರಾಮದ ಹಾಲು ಉತ್ಪಾದಕ ಮಹಿಳಾ ಸಹಕಾರ ಸಂಘದಲ್ಲಿ ಕಾರ್ಯದರ್ಶಿ ಶ್ರೀಮತಿ ಯಶೋಧ ದೇವೇಗೌಡ ರವರು ಲಕ್ಷಾಂತರ ರೂಪಾಯಿ ಅಗರಣ ಮಾಡಿದ್ದಾರೆ ಎಂದು ಆರೋಪ ಇದ್ದು ಕಾರ್ಯದರ್ಶಿಯಾಗಿ ಕಾರ್ಯನಿರ್ವಯಿಸುತ್ತಿದ್ದ ಶ್ರೀಮತಿ ಯಶೋಧ ದೇವೇಗೌಡ್ರು ಕಾರ್ಯದರ್ಶಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ ಕಳೆದ ಮೂರು ನಾಲ್ಕು ದಿನದಿಂದ ಕಾರ್ಯದರ್ಶಿ ಡೇರಿಗೆ ಬರುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು,

ಸಂಘದ ಹಾಲಿ ಅಧ್ಯಕ್ಷರಾಗಿರುವ ಶ್ರೀಮತಿ ರಾಧ ಕುಮಾರ್ ರವರು ಕಾರ್ಯದರ್ಶಿರವರಿಗೆ ಸ್ವಂತ ಸಂಬಂಧಿಕರಾಗಿದ್ದು ಹಗರಣ ಬಗ್ಗೆ ಈಗಾಗಲೇ ಸಂಘದ ಷೇರುದಾರು ದೂರು ನೀಡಿದ್ದಾರೆ ಆದರೆ ಸಂಘದ ನಿರ್ದೇಶಕರಿಗೆ ತಿಳಿಯದಂತೆ ಏಕಾ ಏಕಿ ರಾಜಿನಾಮೆ ಪಡೆದು ಅಂಗಿಕಾರ ಮಾಡಿದ್ದಾರೆ ಎಂದು ಅಧ್ಯಕ್ಷೆ, ಮತ್ತು ಕಾರ್ಯದರ್ಶಿಯ ಮನೆಗೆ ಮುತ್ತಿಗೆ ಹಾಕಿ ರೈತರು ತಾವು ತಂದಿದ್ದ 450 ಲೀಟರ್ ಹಾಲನ್ನು ಅವರ ಮನೆಯ ಮುಂದೆ ನೆಲಕ್ಕೆ ಸುರಿದು ಪ್ರತಿಭಟನೆ ನಡೆಸಿದರು,

ಕಳೆದ ನಾಲ್ಕು ದಿನದಿಂದ ಡೇರಿಯಲ್ಲಿ ಕಾರ್ಯದರ್ಶಿ ಬಾರದ ಹಿನ್ನೆಲೆ ಹಾಲಿನ ಕಂಪ್ಯೂಟರ್ ಬಿಲ್ ನೀಡುತ್ತಿಲ್ಲ ರೈತರು ಎಷ್ಟು ಲೀಟರ್ ಹಾಲು ಹಾಕಿದ್ದಾರೆ ಒಂದು ಲೀಟರ್ ಗೆ ಎಷ್ಟು ಹಣ ಎಂದು ಸರಿಯಾದ ಮಾಹಿತಿ ಸಿಗುತ್ತಿಲ್ಲ ಅಂದು ಆಕ್ರೋಷ ವ್ಯಕ್ತಪಡಿಸಿದರು,

ಕಾರ್ಯದರ್ಶಿ ಹೇಳಿಕೆ: ಸದ್ಯ ಸಂಘದ ಕಾರ್ಯದರ್ಶಿ ಯಶೋಧ ಆರೋಗ್ಯದ ಸಮಸ್ಯೆ ಇಂದ 13-7-25 ರಂದು ರಾಜೀನಾಮೆಯನ್ನು ಸಂಘದ ಆಡಳಿತ ಮಂಡಳಿಗೆ ನೀಡಿದ್ದು 31-08-25 ರಾಜೀನಾಮೆಯನ್ನು ಅಂಗಿಕಾರ ಮಾಡಲಾಗಿದೆ ನನ್ನ ಮೇಲೆ ಇಲ್ಲ ಸಲ್ಲದ ಸುಳ್ಳು ಆರೋಪ ಮಾಡುತ್ತಿದ್ದಾರೆ ಅದರೇ ಇಲಾಖೆಯಿಂದ ವಿಚಾರಣೆ ನಡೆದರೆ ನಾನು ತನಿಖೆಯಲ್ಲಿ ಭಾಗಿಯಾಗುತ್ತೇನೆ ಮತ್ತು ನಮ್ಮ ಸಂಘದ ಯಾವ ಸದಸ್ಯರು ಇದುವರೆಗೂ ಸಂಬಂಧಿಸಿದ ಇಲಾಖೆಯಾಗಲಿ ಅಥವಾ ನಮ್ಮ ಸಂಘಕ್ಕಾಗಲಿ ಲಿಖಿತವಾಗಿ ಯಾವುದೇ ದೂರು ನೀಡಿರುವುದಿಲ್ಲ ಎಂದು ಮಾಧ್ಯಮಕ್ಕೆ ತಿಳಿಸಿದ್ದರು, ಈ ಸಂದರ್ಭದಲ್ಲಿ ಮುಖಂಡರಾದ ಮೂರ್ತಿ, ಕಂತರಾಜು, ನಾಗರಾಜು, ಪ್ರದೀಪ್, ಜಯಮ್ಮ, ಗುಂಡ, ಮಂಜ್ಜಣ್ಣ, ಆನಂದ, ರವಿ, ವೆಂಕಟೇಶ, ನಾಗೇಶ್, ಮಂಜಣ್ಣ, ದಿವಾಕರ, ಪ್ರಸನ್ನ, ದೀಲೀಪ್, ಪ್ರಕಾಶ್, ಸಾಗರ್, ಸೇರಿದಂತೆ ಮತ್ತಿತ್ತರು ಇದ್ದರು,

# ದೈಹಿಕ ಸಂಪರ್ಕಕ್ಕೆ ಒಲ್ಲೆ ಎಂದ ಪತ್ನಿಯ ಕೊಲೆ

ಯಾದಗಿರಿ: ಸುರಪುರದ ಡೊಣ್ಣಿಗೇರದಲ್ಲಿ ಅಮಾನವೀಯ ಕೃತ್ಯ ನಡೆದಿದೆ. ಕೌಂಟುಂಬಿಕ ಹಿಂಸೆಯಿಂದಾಗಿ ತವರು ಮನೆ ಸೇರಿದ್ದ ಮಹಿಳೆಯನ್ನು ಹುಡುಕಿಕೊಂಡು ಬಂದಿದ್ದ ಆಕೆಯ ಪತಿಯೇ ಆಕೆಯನ್ನು ಕೊಡಲಿಯಿಂದ ಕೊಚ್ಚಿ ಕೊಲೆ ಮಾಡಿ ಪೊಲೀಸರಿಗೆ ಶರಣಾಗಿದ್ದಾನೆ. ಇಷ್ಟಕ್ಕೂ ಈ ಕೊಲೆ ನಡೆದಿದ್ದು, ಮಹಿಳೆ ಪತಿಯ ಜತೆ ದೈಹಿಕ ಸಂಪರ್ಕಕ್ಕೆ ನಿರಾಕರಿಸಿದ್ದಕ್ಕೆ ಎನ್ನಲಾಗಿದೆ.

ದೈಹಿಕ ಸಂಪರ್ಕಕ್ಕೆ ಒಪ್ಪದ ಕಾರಣಕ್ಕೆ ವ್ಯಕ್ತಿಯೊಬ್ಬ ಪತ್ನಿಯನ್ನು ಕೊಡಲಿಯಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿದ ದಾರುಣ ಘಟನೆ ಯಾದಗಿರಿ (Yadgir) ಜಿಲ್ಲೆಯ ಸುರಪುರದ ನಗರದ ಡೊಣ್ಣಿಗೇರ ಬಡಾವಣೆಯಲ್ಲಿ ನಡೆದಿದೆ. 40 ವರ್ಷ ವಯಸ್ಸಿನ ಸಂಗಪ್ಪ ಪತ್ನಿ ಮರೆಮ್ಮ (35) ಕೊಲೆ ಮಾಡಿ ಪೊಲೀಸರ ಮುಂದೆ ಶರಣಾಗಿದ್ದಾನೆ. ಸದ್ಯ ಘಟನಾ ಸ್ಥಳಕ್ಕೆ ಸುರಪುರ ಠಾಣೆಯ ಪೊಲೀಸರು ಭೇಟಿ ನೀಡಿ ಸ್ಥಳ ಮಹಜರು ನಡೆಸಿದ್ದು, ಪ್ರಕರಣ ದಾಖಲಿಸಿದ್ದಾರೆ. ಸಂಗಪ್ಪನನ್ನು ಬಂಧಿಸಲಾಗಿದೆ.

ಗಂಡ ಹೆಂಡತಿ ಮಧ್ಯೆ ಭಾನುವಾರ ರಾತ್ರಿ ದೈಹಿಕ ಸಂಪರ್ಕ ವಿಚಾರವಾಗಿ ಜಗಳವಾಗಿತ್ತು. ಪತ್ನಿ ದೈಹಿಕ ಸಂಪರ್ಕಕ್ಕೆ ಒಪ್ಪಿರಲಿಲ್ಲ. ಈ ವೇಳೆ, ಜಗಳ ವಿಕೋಪಕ್ಕೆ ತಿರುಗಿದ್ದು, ಕೊಲೆಯಲ್ಲಿ ಅಂತ್ಯವಾಗಿದೆ. ಕೊಲೆಗಾರ ಸಂಗಪ್ಪ ಕಳೆದ ಎರಡು ದಿನಗಳ ಹಿಂದ ತನ್ನ ಊರಾದ ಕಕ್ಕೇರದಿಂದ ಸುರಪುರಕ್ಕೆ ಬಂದಿದ್ದ. ಗಂಡ ಸರಿಯಾಗಿ ನೋಡಿಕೊಳ್ಳುತ್ತಿಲ್ಲ ಎಂದು ಒಂದು ವರ್ಷದಿಂದ ಮರೆಮ್ಮ ತವರು ಮನೆಯಲ್ಲಿದ್ದರು. ಭಾನುವಾರ ಸುರಪುರಕ್ಕೆ ಬಂದ ಸಂಗಪ್ಪ ಪತ್ನಿಯನ್ನು ದೈಹಿಕ ಸಂಪರ್ಕಕ್ಕೆ ಆಗ್ರಹಿಸಿದ್ದಾನೆ. ಒಪ್ಪದೇ ಇರುವುದಕ್ಕೆ ಕೊಡಲಿಯಿಂದ ಕೊಚ್ಚಿ ಕೊಲೆ ಮಾಡಿ ಪೊಲೀಸರಿಗೆ ಶರಣಾಗಿದ್ದಾನೆ.






# ಹಾಸನಾಂಬೆ ಉತ್ಸವ: ಅಮ್ಮನ ದರ್ಶನ ಯಾವಾಗ್ಯಾವಾಗ



ಹಾಸನ: ವರ್ಷಕ್ಕೊಮ್ಮೆ ದರ್ಶನ ನೀಡುವ ಹಾಸನಾಂಬೆ ಉತ್ಸವ ಈ ವರ್ಷ ಅಕ್ಟೋಬರ್ 9 ರಿಂದ 23 ರವರೆಗೆ ನಡೆಯಲಿದೆ. ಈ ಕುರಿತಾಗಿ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಸುದ್ದಿಗೋಷ್ಠಿ ಮಾಡಿ ಮಾಹಿತಿ ನೀಡಿದ್ದಾರೆ. ಹಾಗಾದರೆ ಈ ಬಾರಿ ಮಹಾತಾಯಿಯ ದರ್ಶನ ಯಾವಾಗೆಲ್ಲಾ ದೊರೆಯಲಿದೆ ಎಂಬ ಸಂಪೂರ್ಣ ಮಾಹಿತಿ ಇಲ್ಲಿದೆ.

ಹಾಸನದ ಅಧಿದೇವತೆ ಹಾಸನಾಂಬೆಯ ವಾರ್ಷಿಕ ದರ್ಶನೋತ್ಸವಕ್ಕೆ ದಿನಗಣನೆ ಶುರುವಾಗಿದೆ. ಹಾಸನ ಜಿಲ್ಲಾಡಳಿತ ಎಲ್ಲಾ ಸಿದ್ಧತೆ ಮಾಡಿಕೊಂಡಿದೆ. ಈ ವರ್ಷ ಅಕ್ಟೋಬರ್ 9ರಿಂದ 23ರವರೆಗೆ ಹಾಸನಾಂಬೆ ಉತ್ಸವ ನಡೆಯಲಿದೆ. ಅ. 10ರಿಂದ 22ರ ತನಕ ಸಾರ್ವಜನಿಕರಿಗೆ ದರ್ಶನಕ್ಕೆ ಅವಕಾಶವಿರಲಿದೆ ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಹೇಳಿದ್ದಾರೆ. ನಗರದಲ್ಲಿ ನಡೆದ ಹಾಸನ ಜನಪ್ರತಿನಿಧಿಗಳ ಜೊತೆ ಸಚಿವ ಕೃಷ್ಣಭೈರೇಗೌಡ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವರ್ಷ 25 ಲಕ್ಷ ಭಕ್ತರು ಆಗಮಿಸುವ ನಿರೀಕ್ಷೆ ಇದೆ. ದಿನಕ್ಕೆ ಒಂದು ಸಾವಿರ ಪಾಸ್ ವಿತರಣೆ ಮಾಡುತ್ತೇವೆ ಎಂದು ತಿಳಿಸಿದರು.

**ವಿಐಪಿಗಳು ಹೆಚ್ಚು ಜನರನ್ನು ಕರೆದುಕೊಂಡು ಬರಬೇಡಿ:**ಬೆಳಗ್ಗೆ 10.30ರಿಂದ ಮಧ್ಯಾಹ್ನ 12.30ರವರೆಗೆ ವಿಐಪಿ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಅವಧಿ ಮುಗಿದ ಬಳಿಕ ವಿಐಪಿ ಗೇಟ್‌ಗೆ ಬೀಗ ಹಾಕುತ್ತೇವೆ. ವಿಐಪಿಗಳು ಕುಟುಂಬಕ್ಕೆ ಸಮೇತವಾಗಿ ಬನ್ನಿ, ಆದರೆ ತಮ್ಮ ಜೊತೆ ಹೆಚ್ಚು ಜನರನ್ನು ಕರೆದುಕೊಂಡು ಬರಬೇಡಿ. ಒಂದು ವೇಳೆ ಕರೆದುಕೊಂಡು ಬಂದರು ಸಾರ್ವಜನಿಕರ ಜೊತೆ ದರ್ಶನ ಮಾಡಲಿ. ಕೊನೆಯ 2 ದಿನ ಯಾವುದೇ ವಿಐಪಿ ದರ್ಶನ ಇರಲ್ಲ ಎಂದು ಸಚಿವ ಕೃಷ್ಣಭೈರೇಗೌಡ ಹೇಳಿದ್ದಾರೆ.

ರಾಜ್ಯಪಾಲರು, ಸಿಎಂ, ಡಿಸಿಎಂ, ಮಾಜಿ ಪ್ರಧಾನಿಗಳು, ಮುಖ್ಯ ನ್ಯಾಯಾಧೀಶರು ಸೇರಿದಂತೆ ನೇರವಾಗಿ ದೇವಸ್ಥಾನಕ್ಕೆ ಹೋಗಬೇಕು. ಆದರೆ ಉಳಿದ ಜನಪ್ರತಿನಿಧಿಗಳು, ವಿಐಪಿಗಳು ಹಾಸನದ ಐಬಿಗೆ ಬರಬೇಕು. ಅಲ್ಲಿಂದ ವಾಹನದಲ್ಲಿ ಕರೆದುಕೊಂಡು ಹೋಗಿ ದರ್ಶನ ಮಾಡಿಸಲಾಗುವುದು ಎಂದು ತಿಳಿಸಿದರು.

**ಈ ವರ್ಷ ಸಾಂಸ್ಕೃತಿಕ ಕಾರ್ಯಕ್ರಮ** : ರಾಜ್ಯ ಮತ್ತು ಹೊರರಾಜ್ಯದಿಂದಲೂ ಜನರು ಬರುತ್ತಾರೆ. ಬಂದವರನ್ನು ಅತಿಥಿಗಳಂತೆ ನಡೆಸಿಕೊಳ್ಳಬೇಕು. ಅದಕ್ಕೆ ಬೇಕಾದ ಎಲ್ಲಾ ತಯಾರಿ ಮಾಡಿಕೊಂಡಿದ್ದೇವೆ. ಸಾರ್ವಜನಿಕರ ದರ್ಶನ ನಿರಂತರವಾಗಿರಬೇಕು. ಈ ವರ್ಷ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇವೆ. ಮೂರು ವೇದಿಕೆಗಳನ್ನು ನಿರ್ಮಾಣ ಮಾಡಲಿದ್ದೇವೆ. ಜಾನಪದ ಕಲೆಗಳ ಪ್ರದರ್ಶನಕ್ಕೆ ಹೆಚ್ಚಿನ ಒತ್ತು ನೀಡಲಿದ್ದೇವೆ. ಆ ಮೂಲಕ ಭಕ್ತರಿಗೆ ಜಾನಪದ ಕಲೆಗಳ ದರ್ಶನವಾಗಲಿದೆ ಎಂದರು.

**ಈ ಬಾರಿ ಹೆಲಿ ಟೂರಿಸಂ :** ಒಂದು ವೇದಿಕೆಯನ್ನು ಸ್ಥಳೀಯ ಹಾಸನದ ಪ್ರತಿಭೆಗಳಿಗೆ ಅವಕಾಶ ನೀಡಲಾಗುವುದು. ಭಕ್ತರಿಗೆ ದೇವಿಯ ದರ್ಶನದ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮ ಸವಿಯಬಹುದು. ಈ ಬಾರಿ ಹೆಲಿ ಟೂರಿಸಂ ಆರಂಭಿಸಲಿದ್ದೇವೆ. ಸ್ಥಳೀಯ ಕರಕುಶಲ ವಸ್ತು ಪ್ರದರ್ಶನ ಹಮ್ಮಿಕೊಂಡಿದ್ದೇವೆ. ಇದು ಸ್ಥಳೀಯ ಮಹಿಳಾ ಸಬಲೀಕರಣಕ್ಕೆ ಸಹಾಯಕವಾಗಲಿದೆ ಎಂದಿದ್ದಾರೆ. ಇನ್ನು ಭಕ್ತರ ಸುರಕ್ಷಿತೆ ಬಹಳ ಮುಖ್ಯ, ಎಐ, ಡ್ರೋಣ್ ತಂತ್ರಜ್ಞಾನ ಬಳಕೆ ಮಾಡುತ್ತಿದ್ದೇವೆ. ಕಂಟ್ರೋಲ್ ರೂಂ, ಸಿಸಿಟಿವಿ ಅಳವಡಿಸಿದ್ದೇವೆ. 250 ಸಿಸಿಟಿವಿ ಅಳವಡಿಕೆ ಮಾಡಲಾಗಿದ್ದು, ಫೇಸ್, ಹೆಡ್ ಕೌಂಟಿಂಗ್ ಎಐ ಸಿಸಿಟಿವಿ ಅಳವಡಿಕೆ ಮಾಡುತ್ತಿದ್ದೇವೆ. ಸುಮಾರು ಎರಡು ಸಾವಿರ ಪೊಲೀಸರು ನಿಯೋಜನೆ ನೀಡಲಾಗುವುದು. ಸಾರ್ವಜನಿಕರಿಗೆ 300 ರೂ ಮತ್ತು 1 ಸಾವಿರ ರೂ. ಟಿಕೆಟ್ ಇದೆ. ಪಾಸ್‌ಗಳಿಗೆ ಹೆಚ್ಚು ಒತ್ತಡ ಇತ್ತು. ಪಾಸ್ ತೆಗೆದುಕೊಂಡು ಬರುವವರ ಸಂಖ್ಯೆ ಹೆಚ್ಚಾಗಿತ್ತು. ಇದಕ್ಕೆ ಭಕ್ತರು ಆಕ್ರೋಶ ವ್ಯಕ್ತಪಡಿಸಿದ್ದರು. ಸಾರ್ವಜನಿಕರ ತಾಳ್ಮೆ ಪರೀಕ್ಷೆ ಮಾಡಬಾರದು. ಹೀಗಾಗಿ ಪಾಸ್‌ಗಳಿಗೆ ನಿಯಂತ್ರಣ ಹೇರಬೇಕು ಎಂಬ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಅವರು ಹೇಳಿದ್ದಾರೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.